# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಶಶಿಲ್ ಜಿ. ನಮೋಶಿ |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **799** |
| ಉತ್ತರಿಸಬೇಕಾದ ದಿನಾಂಕ | : | **21.02.2024** |
| ಉತ್ತರಿಸಬೇಕಾದ ಸಚಿವರು | : | ವಸತಿ ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದಡಿ ಬರುವ ವಸತಿ ಯೋಜನೆಗಳು ಎಷ್ಟು; ಅವು ಯಾವುವು; | ವಸತಿ ಇಲಾಖೆಯಿಂದ ಈ ಕೆಳಕಂಡ ವಸತಿ / ನಿವೇಶನ ಯೋಜನೆಗಳನ್ನು ರಾಜೀವ್ ಗಾಂಧಿ ವಸತಿ ನಿಗಮದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ.<br>**ರಾಜ್ಯ ಪುರಸ್ಕೃತ ವಸತಿ ಯೋಜನೆಗಳು:**<br>1. ಬಸವ ವಸತಿ ಯೋಜನೆ<br>2. ಡಾ. ಬಿ.ಆರ್ . ಅಂಬೇಡ್ಕರ್ ವಸತಿ ಯೋಜನೆ (ಗ್ರಾಮೀಣ & ನಗರ)<br>3. ದೇವರಾಜು ಅರಸು ವಸತಿ ಯೋಜನೆ (ಗ್ರಾಮೀಣ & ನಗರ)<br>4. ವಾಜಪೇಯಿ ನಗರ ವಸತಿ ಯೋಜನೆ<br>5. ಮುಖ್ಯಮಂತ್ರಿಗಳ ಬಹುಮಹಡಿ ಬೆಂಗಳೂರು ವಸತಿ ಯೋಜನೆ (ಬೆಂಗಳೂರು ನಗರದಲ್ಲಿ ಮಾತ್ರ)<br>6. ಮುಖ್ಯಮಂತ್ರಿಗಳ ಗ್ರಾಮೀಣ ನಿವೇಶನ ಯೋಜನೆ<br>7. ಮುಖ್ಯಮಂತ್ರಿಗಳ ನಗರ ನಿವೇಶನ ಯೋಜನೆ<br>**ಕೇಂದ್ರ ಪುರಸ್ಕೃತ ವಸತಿ ಯೋಜನೆಗಳು:**<br>1. ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ)<br>2. ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) |
| ಆ) | ಈ ಯೋಜನೆಗಳಡಿ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಅನುಸರಿಸುವ ನಿಯಮ ಹಾಗೂ ಮಾನದಂಡಗಳೇನು; | **ಗ್ರಾಮೀಣ ಪ್ರದೇಶದಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡುವಾಗ ಅನುಸರಿಸುವ ನಿಯಮ ಹಾಗೂ ಮಾನದಂಡಗಳು ಈ ಕೆಳಗಿನಂತಿದೆ:**<br>• ಅರ್ಜಿದಾರರು ಕಡ್ಡಾಯವಾಗಿ ಮಹಿಳೆಯಾಗಿರಬೇಕು (ವಿವಾಹಿತ ಅಥವಾ ಏಕ ಮಹಿಳಾ ಒಡೆತನದ ಗೃಹಿಣಿ) ಮಾಜಿ ಯೋಧರು, ವಿಧುರರು, ಅಂಗವಿಕಲರು ಮತ್ತು ಹಿರಿಯ ನಾಗರೀಕರಾಗಿದ್ದಲ್ಲಿ ಪುರುಷರು ಸಹಾ ಅರ್ಹರಾಗಿರುತ್ತಾರೆ.<br>• ಅರ್ಜಿದಾರರ ಕುಟುಂಬವು ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದಿದ್ದು, ವಾರ್ಷಿಕ ಆದಾಯವು ಗ್ರಾಮೀಣ ಪ್ರದೇಶದಲ್ಲಿ ರೂ.1,20,000/- ಹಾಗೂ ನಗರ ಪ್ರದೇಶದಲ್ಲಿ ರೂ.2,00,000/-ಕ್ಕಿಂತ ಕಡಿಮೆ ಇರಬೇಕು.<br>• ಅರ್ಜಿದಾರರ ಕುಟುಂಬವು ವಸತಿ ರಹಿತರಾಗಿದ್ದು, ಅರ್ಜಿದಾರರು ಅಥವಾ ಕುಟುಂಬದ ಯಾವುದೇ ಸದ್ಯಸರ ಹೆಸರಿನಲ್ಲಿ ಕರ್ನಾಟಕದ ಯಾವುದೇ ಭಾಗದಲ್ಲಿ ಸ್ವಂತ ಮನೆಯನ್ನು ಹೊಂದಿರಬಾರದು. ಶಿಥಿಲಗೊಂಡ ಮನೆ ಅಥವಾ ಗುಡಿಸಲಿನಲ್ಲಿ ವಾಸಿಸುತ್ತಿರುವವರು ಅರ್ಹರಾಗಿರುತ್ತಾರೆ.<br>• ಅರ್ಜಿದಾರರು ಸ್ವಂತ ನಿವೇಶನ ಹೊಂದಿದ್ದು ನಿವೇಶನಕ್ಕೆ ಸಂಬಂಧಿಸಿದಂತೆ ಖಾತೆ ಹೊಂದಿರಬೇಕು (ಪಾರಂಪರಿಕ ಅರಣ್ಯ ಹಕ್ಕುಗಳ ಕಾಯ್ದೆಯನ್ವಯ ಜಿಲ್ಲಾ ಸಮಿತಿಯಿಂದ ನೀಡಲಾದ ಹಕ್ಕುಪತ್ರ ಪಡೆದಿದ್ದಲ್ಲಿ ವಸತಿ ಸೌಕರ್ಯ ಪಡೆಯಲು ಪರಿಗಣಿಸಬಹುದಾಗಿದೆ.)<br>• ಬೇರೆ ಯಾವುದೇ ಯೋಜನೆ/ಇಲಾಖೆಯಿಂದ ಈಗಾಗಲೇ ವಸತಿ ಸೌಲಭ್ಯ ಪಡೆದಿರಬಾರದು.<br>• ಪ್ರಧಾನ ಮಂತ್ರಿ ಆವಾಸ್ ಯೋಜನೆ(ಗ್ರಾ)ಯಡಿ ವಸತಿ ಸೌಲಭ್ಯ ಪಡೆಯಲು ಕೇಂದ್ರ ಸರ್ಕಾರದ Awaas Plus PWL ಪಟ್ಟಿಯಲ್ಲಿ ಹೆಸರು ಸೇರಿರಬೇಕು. |

- ಡಾ|| ಬಿ.ಆರ್.ಅಂಬೇಡ್ಕರ್ ಆವಾಸ್ ಯೋಜನೆಯಡಿ ವಸತಿ ಸೌಲಭ್ಯ ಪಡೆಯಲು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟವರ್ಗಕ್ಕೆ ಸೇರಿದವರಾಗಿರಬೇಕು.

**ಪ್ರಧಾನ ಮಂತ್ರಿ ಆವಾಸ್ ಯೋಜನೆ(ನಗರ) ಯಡಿ ಫಲಾನುಭವಿಗಳನ್ನು ಗುರುತಿಸಲು/ ಆಯ್ಕೆ ಮಾಡುವ ಮಾನದಂಡ ಈ ಕೆಳಗಿನಂತಿವೆ.**

- ಫಲಾನುಭವಿಯು ಬೇಡಿಕೆ ಸಮೀಕ್ಷೆಯಲ್ಲಿರಬೇಕು.
- ದೇಶದಾದ್ಯಂತ ಅವನ/ಅವಳ ಹೆಸರಿನಲ್ಲಿ ಯಾವುದೇ ಮನೆ ಇರಬಾರದು.
- ವಾರ್ಷಿಕ ಆದಾಯ 3 ಲಕ್ಷಕ್ಕಿಂತ ಕಡಿಮೆ ಇರಬೇಕು.
- ಇತರೇ ವಸತಿ ಯೋಜನೆಗಳಲ್ಲಿ ಈಗಾಗಲೇ ಸಹಾಯಧನ ಪಡೆದಿರಬಾರದು.
- ಫಲಾನುಭವಿ ಸ್ವತಃ ಮನೆ ನಿರ್ಮಿಸುವುದಾದಲ್ಲಿ (BLC) ಸ್ವಂತ ನಿವೇಶನ ಹೊಂದಿರಬೇಕು.

ಇ) ಕಳೆದ ಎರಡು ವರ್ಷಗಳಲ್ಲಿ ಕಲಬುರಗಿ ಜಿಲ್ಲೆಯ ಎಷ್ಟು ಫಲಾನುಭವಿಗಳಿಗೆ ಮನೆಗಳನ್ನು ಹಂಚಿಕೆ ಮಾಡಲಾಗಿದೆ; ಮತ್ತು ಪರಿಹಾರದ ಮೊತ್ತವನ್ನು ಬಿಡುಗಡೆ ಮಾಡಲಾಗಿದೆ? (ಆಳಂದ, ಅಫಜಲಪುರ ತಾಲ್ಲೂಕುಗಳವಾರು ಮತ್ತು ಯೋಜನೆಗಳವಾರು ಸಂಪೂರ್ಣ ವಿವರ ನೀಡುವುದು)

ಕಳೆದ ಎರಡು ವರ್ಷಗಳಲ್ಲಿ ಅಂದರೆ 2021-22 ಹಾಗೂ 2022-23ನೇ ಸಾಲುಗಳಲ್ಲಿ ಕಲಬುರಗಿ ಜಿಲ್ಲೆಗೆ ವಿವಿಧ ವಸತಿ ಯೋಜನೆಗಳಡಿಯಲ್ಲಿ **18170** ಮನೆಗಳನ್ನು ಹಂಚಿಕೆ ಮಾಡಲಾಗಿದೆ.

ಈ ಪೈಕಿ ಆಳಂದ ಮತ್ತು ಅಫಜಲಪುರ ತಾಲ್ಲೂಕುಗಳಿಗೆ ವಿವಿಧ ವಸತಿ ಯೋಜನೆಗಳಡಿಯಲ್ಲಿ **2603** ಮನೆಗಳನ್ನು ಹಂಚಿಕೆ ಮಾಡಲಾಗಿದ್ದು, ಯೋಜನಾವಾರು ಹಾಗೂ ತಾಲ್ಲೂಕುವಾರು ವಿವರಗಳನ್ನು **ಅನುಬಂಧ-1**ರಲ್ಲಿ ಒದಗಿಸಲಾಗಿದೆ.

ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ (ನಗರ) ಕಲಬುರಗಿ ಜಿಲ್ಲೆಗೆ 2021-22 ಸಾಲಿನಲ್ಲಿ ಒಟ್ಟು 2111 ಮನೆಗಳನ್ನು ನಿರ್ಮಿಸಲು ಕೇಂದ್ರ ಸರ್ಕಾರದಿಂದ ಅನುಮೋದನೆ ಪಡೆಯಲಾಗಿದೆ. ವಿವರ ಈ ಕೆಳಗಿನಂತಿದೆ.

| ಘಟಕ | ಮನೆಗಳ ಸಂಖ್ಯೆ | ಪೂರ್ಣ | ಪ್ರಗತಿ | ಪ್ರಾರಂಭವಾಗದ ಮನೆಗಳು |
|---|---|---|---|---|
| AHP-KSDB | 1770 | 147 | 1106 | 517 |
| BLC | 341 | 103 | 74 | 164 |
| **Total** | **2111** | **250** | **1180** | **681** |

ಕಳೆದ ಎರಡು ವರ್ಷಗಳಲ್ಲಿ ಅಂದರೆ 2021-22ನೇ ಸಾಲಿನಿಂದ ಈವರೆಗೆ ಈ ಮೇಲೆ ತಿಳಿಸಿದ ವಿವಿಧ ವಸತಿ ಯೋಜನೆಗಳಡಿಯಲ್ಲಿ ಹಂಚಿಕೆಯಾದ ಮನೆಗಳಿಗೆ ಜನವರಿ 2024ರ ಅಂತ್ಯದವರೆಗೆ ಜಿಪಿಎಸ್ ಆಧಾರಿತ ಭೌತಿಕ ಪ್ರಗತಿಗೆ ಅನುಗುಣವಾಗಿ ಕಲಬುರಗಿ ಜಿಲ್ಲೆಯ ಬಿ.ಎಲ್.ಸಿ. ಫಲಾನುಭವಿಗಳಿಗೆ ರೂ.8611.03ಲಕ್ಷಗಳು ಹಾಗೂ ಎ.ಹೆಚ್.ಪಿ. ಘಟಕದಡಿ ರೂ.302.34ಲಕ್ಷಗಳು ಒಟ್ಟಾರೆಯಾಗಿ ರೂ.8913.37 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

ಮುಂದುವರೆದು, ಅಫಜಲಪುರ ತಾಲ್ಲೂಕಿನ ಫಲಾನುಭವಿಗಳಿಗೆ ರೂ.877.25 ಲಕ್ಷಗಳು ಮತ್ತು ಅಳಂದ ತಾಲ್ಲೂಕಿನ ಫಲಾನುಭವಿಗಳಿಗೆ ರೂ.1236.79 ಲಕ್ಷಗಳು ಒಟ್ಟು ರೂ.2114.04 ಲಕ್ಷಗಳನ್ನು ಜಿಪಿಎಸ್ ಆಧಾರಿತ ಭೌತಿಕ ಪ್ರಗತಿಗೆ ಅನುಗುಣವಾಗಿ ಬಿಡುಗಡೆಗೊಳಿಸಲಾಗಿದೆ. ಯೋಜನವಾರು ಬಿಡುಗಡೆಗೊಳಿಸಲಾದ ವಿವರಗಳು ಈ ಕೆಳಗಿನಂ

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಯೋಜನೆ | ಅಫಜಲಪುರ | ಆಳಂದ | ಒಟ್ಟು |
|---|---|---|---|---|
| 1. | ಬಸವ ವಸತಿ ಯೋಜನೆ | 564.17 | 771.70 | 1335.87 |
| 2. | ಡಾ. ಬಿ.ಆರ್. ಅಂಬೇಡ್ಕರ್ ನಿವಾಸ್ ಯೋಜನೆ | 284.59 | 435.78 | 720.37 |
| 3. | ದೇವರಾಜ್ ಅರಸು ವಸತಿ ಯೋಜನೆ | 4.35 | 6.08 | 10.43 |
| 4. | ವಾಜಪೇಯಿ ನಗರ ವಸತಿ ಯೋಜನೆ | 24.14 | 23.23 | 47.37 |
| | **ಒಟ್ಟು** | **877.25** | **1236.79** | **2114.04** |

ಸಂಖ್ಯೆ: ವಇ 57 ಹೆಚ್ಎಎಂ 2024

**(ಬಿ.ಝಡ್. ಜಮೀರ್ ಅಹ್ಮದ್ ಖಾನ್)**
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು